



ಅರುಣ ಪಿ. ಭಟ್ಟ

## ವಾರಭವಿಷ್ಯ: 29.02.2024ರಿಂದ 06.03.2024ರವರೆಗೆ




ಹಣ ಸಂಪಾದಿಸಲು ನೀವು ವಿಭಿನ್ನ ವಿಧಾನಗಳನ್ನು ಅಳವಡಿಸಿಕೊಳ್ಳಬಹುದು. ನಿಮ್ಮ ಪ್ರಯತ್ನಗಳು ಯಶಸ್ವಿಯಾಗುತ್ತವೆ. ಕುಟುಂಬದ ಸದಸ್ಯರೊಂದಿಗಿನ ಸಂಬಂಧಗಳು ಸುಧಾರಿಸುತ್ತವೆ. ನಿಮ್ಮ ಕುಟುಂಬದ ಸದಸ್ಯರು ವ್ಯತ್ಯಾಸಗಳನ್ನು ಅಳಿಸಿ ಪರಸ್ಪರ ಬೆಂಬಲಿಸುತ್ತಿರುವುದನ್ನು ನೋಡಿ ನಿಮಗೆ ಸಂತೋಷವಾಗುತ್ತದೆ. ನಿಮ್ಮ ಆದಾಯದಲ್ಲಿ ಹೆಚ್ಚಳವಾಗಬಹುದು. ಶುಭದಿನ 02. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಒಂದೇ ಸಲಕ್ಕೆ ಹಲವು ಅವಕಾಶಗಳು ನಿಮ್ಮನ್ನು ಹುಡುಕಿಕೊಂಡು ಬರುತ್ತವೆ. ಯಾವುದನ್ನು ಆಯ್ಕೆ ಮಾಡಿಕೊಳ್ಳಬೇಕು ಎಂಬ ಬಗ್ಗೆ ಸ್ಪಷ್ಟತೆ ಇರಲಿ. ಸರ್ಕಾರಿ ನೌಕರರಿಗೆ ವರ್ಗಾವಣೆ ಆದರೂ ಆಗಬಹುದು. ವೈಯಕ್ತಿಕ ಸಂಬಂಧದಲ್ಲಿ ಬಹಳ ಹುಷಾರಾಗಿರಬೇಕು. ಕೋರ್ಟ್‌ನಲ್ಲಿ ಪ್ರಕರಣ ನಡೆಯುತ್ತಿದ್ದರೆ ಆ ಕಡೆ ಹೆಚ್ಚಿನ ಗಮನ ನೀಡಬೇಕು. ಶುಭದಿನ 05. ಕಾಲಭೈರವಾಷ್ಟಕ ಸ್ತೋತ್ರ ಪಠಿಸಿರಿ.




ನಿಮ್ಮ ವೈಯಕ್ತಿಕ ವರ್ಚಸ್ಸಿನ ನೆರವಿನಿಂದ ಇತರರಿಗೆ ಸಹಾಯ ಮಾಡಲು ಮುಂದಾಗುತ್ತೀರಿ. ಬಹಳ ಕಾಲದಿಂದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿದ್ದರೆ ಅದರ ಶ್ರಮದ ಫಲವನ್ನು ಪಡೆಯಲು ಇದು ಸರಿಯಾದ ಕಾಲ. ಹೊಸ ವಸ್ತುವೊಂದನ್ನು ಖರೀದಿ ಮಾಡುವ ಪಕ್ಷದಲ್ಲಿ ನಿಮ್ಮ ನಿರ್ಧಾರವನ್ನು ಮುಂದಕ್ಕೆ ಹಾಕುವುದೇ ಉತ್ತಮ. ಶುಭದಿನ 03. ಶ್ರೀಗೋವಿಂದಾಷ್ಟಕಮ್ ಪಠಿಸಿರಿ.




ನಿಮ್ಮ ಆದಾಯದಲ್ಲಿ ಈ ವಾರ ಹೆಚ್ಚಳ ಕಾಣಿಸಿಕೊಳ್ಳಲಿದೆ. ನೀವು ಹಾಕಿದ ಶ್ರಮಕ್ಕೆ ಪ್ರತಿಫಲ ದೊರೆಯಲು ಆರಂಭವಾಗುತ್ತದೆ. ನಿಮ್ಮ ವರ್ಚಸ್ಸು, ಕೀರ್ತಿ ಹೆಚ್ಚಾಗುತ್ತದೆ. ವಿದ್ಯಾರ್ಥಿಗಳಿಗೆ ಈ ವಾರ ಯಶಸ್ಸು ದೊರೆಯುವ ಅವಕಾಶಗಳು ಹೆಚ್ಚಿವೆ. ಕ್ರೀಡಾ ಕ್ಷೇತ್ರದಲ್ಲಿ ಪ್ರಯತ್ನ ಮಾಡುತ್ತಿರುವವರು ಯಶಸ್ಸು ಪಡೆಯುವ ಅವಕಾಶ ಹೆಚ್ಚಾಗಿರುತ್ತದೆ. ಶುಭದಿನ 04. ವಿಷ್ಣುಸಹಸ್ರನಾಮ ಓದಿರಿ.




ಉದ್ಯೋಗ ನಿಮಿತ್ತ ದೂರ ಪ್ರಯಾಣ ಮಾಡಬೇಕಾದ ಸನ್ನಿವೇಶ ಎದುರಾಗಲಿದೆ. ಹಣ ಹೂಡಿಕೆಯಲ್ಲಿ ಉತ್ತಮ ಲಾಭ. ಉದ್ಯೋಗ ಸ್ಥಳದಲ್ಲಿ ಸ್ವಲ್ಪ ಮಟ್ಟಿಗೆ ಒತ್ತಡ ಕಾಣಿಸಿಕೊಳ್ಳಬಹುದು. ಆರೋಗ್ಯದಲ್ಲೂ ಏರುಪೇರಾಗುತ್ತದೆ. ಸೋದರ– ಸೋದರಿಯರ ಜೊತೆಗೆ ಉತ್ತಮ ಬಾಂಧವ್ಯ ಇರುತ್ತದೆ. ಸಂತಾನ ನಿರೀಕ್ಷೆಯಲ್ಲಿ ಇರುವವರಿಗೆ ಶುಭ ಸುದ್ದಿಯ ಯೋಗವಿದೆ. ಶುಭದಿನ 06. ದೇವಿ ಆರಾಧನೆ, ಸೌಂದರ್ಯಲಹರಿ ಪಠಿಸಿರಿ.




ವಾರದ ಶುರುವಿನಿಂದಲೇ ಅಂದುಕೊಂಡ ಯೋಜನೆಗಳನ್ನು ಪೂರ್ಣಗೊಳಿಸಲು ಸಾಧ್ಯವಾಗುತ್ತದೆ. ನಿಮ್ಮ ಮೇಲಧಿಕಾರಿಗಳಿಗೆ ಕೆಲಸದ ಪ್ರಗತಿ ಬಗ್ಗೆ ವರದಿ ನೀಡುತ್ತೀರಿ. ಪರಿಣಾಮಕಾರಿಯಾದ ಕಾರ್ಯ ವೈಖರಿಯನ್ನು ಮೆಚ್ಚಿಕೊಳ್ಳುತ್ತಾರೆ. ಉದ್ಯೋಗ ಜೀವನದಲ್ಲಿ ಹೆಮ್ಮೆ ಪಡುವಂಥ ಸನ್ನಿವೇಶ ಇದಾಗಿರುತ್ತದೆ. ಕುಟುಂಬದಲ್ಲಿ ಸಂತಸ ಇರುತ್ತದೆ. ಶುಭದಿನ 02. ಲಕ್ಷ್ಮೀ ನಾರಾಯಣ ಹೃದಯ ಪಾರಾಯಣ ಮಾಡಿರಿ.




ಪುಣ್ಯಕ್ಷೇತ್ರ ದರ್ಶನಕ್ಕೆ ತೆರಳುವ ಸಾಧ್ಯತೆ. ಅಗತ್ಯಕ್ಕೆ ತಕ್ಕಂತೆ ಈ ವಾರ ಕೆಲ ನಿಯಮಗಳನ್ನು ಅಳವಡಿಸಿಕೊಳ್ಳಲಿದ್ದೀರಿ. ಇದರಿಂದ ಮಾರುಕಟ್ಟೆಯ ಹಿಡಿತ ಸಾಧಿಸಲು ಸಾಧ್ಯವಾಗುತ್ತದೆ. ಆದರೆ ಇದಕ್ಕಾಗಿ ನೀವು ಹೆಚ್ಚಿನ ಶ್ರಮವನ್ನು ಹಾಕಬೇಕಾಗುತ್ತದೆ. ಕೆಲವು ಕೆಲಸಗಳನ್ನು ಪೂರ್ಣಗೊಳಿಸುವ ನಿಟ್ಟಿನಲ್ಲಿ ನಿಮ್ಮ ಸೋದರ– ಸೋದರಿ ಸಹಾಯಕ್ಕೆ ನಿಲ್ಲುತ್ತಾರೆ. ಶುಭದಿನ 03. ಆದಿತ್ಯ ಹೃದಯ ಪಠಿಸಿರಿ.




ಕುಟುಂಬ ಸದಸ್ಯರ ಜೊತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ. ಈ ವಾರ ನಿಮ್ಮ ಯಶಸ್ಸಿಗೆ ಹೆಚ್ಚು ಚಟುವಟಿಕೆಯಿಂದ ಇರಬೇಕಾಗುತ್ತದೆ. ಭೂ ವ್ಯಾಜ್ಯವೊಂದಕ್ಕೆ ಶ್ರಮ ಹಾಕಲಿದ್ದೀರಿ. ವಿರೋಧಿ ಪಾಳಯದವರು ಈ ವಿಚಾರದಲ್ಲಿ ಇನ್ನಷ್ಟು ಸಮಸ್ಯೆಗೆ ಎಳೆಯಲಿದ್ದಾರೆ. ನೀವು ಪ್ರತಿನಿಧಿಸುವ ಸಂಸ್ಥೆಯ ಸಾಮರ್ಥ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕೆಲವು ಸೂತ್ರಗಳನ್ನು ರೂಪಿಸಲಿದ್ದೀರಿ. ಶುಭದಿನ 02. ಚಂಡಿ ಪಾರಾಯಣ ಮಾಡಿರಿ.




ವಾರದ ಆರಂಭದಿಂದಲೇ ನಿಮ್ಮ ಕೆಲಸಗಳಿಗೆ ವೇಗ ನೀಡುತ್ತೀರಿ. ನಿಮ್ಮ ಕಾರ್ಯ ಯೋಜನೆಗಳನ್ನು ಅಂತಿಮಗೊಳಿಸಲು ಅಧಿಕಾರಿಗಳ ನೆರವು ದೊರೆಯುತ್ತದೆ. ಇದರಿಂದ ನಿಮ್ಮ ಕೆಲಸ ಇನ್ನಷ್ಟು ಪರಿಣಾಮಕಾರಿಯಾಗಿ ಮಾಡಲು ಸಾಧ್ಯವಾಗುತ್ತದೆ. ಈ ಅಗತ್ಯ ಸಿಬ್ಬಂದಿಯ ನೇಮಕದಲ್ಲಿ ಕೆಲವು ಸವಾಲುಗಳನ್ನು ಎದುರಿಸಬೇಕಾಗುತ್ತದೆ. ಶುಭದಿನ 03. ಶ್ರೀ ಲಕ್ಷ್ಮೀ ನರಸಿಂಹ ಪಂಚರತ್ನ ಓದಿರಿ.




ಈ ಹಿಂದೆಂದಿಗಿಂತ ಯೋಜನೆಗಳನ್ನು ವೇಗವಾಗಿ ಅನುಷ್ಠಾನಕ್ಕೆ ತರಲು ಉತ್ಸಾಹದಿಂದ ಕಾರ್ಯ ನಿರ್ವಹಿಸುತ್ತೀರಿ. ಬೇರೊಬ್ಬರ ಮೇಲಿನ ಅವಲಂಬನೆ ಕಡಿಮೆ ಮಾಡಿಕೊಳ್ಳಲಿದ್ದೀರಿ. ಹೂಡಿಕೆ, ವಿದೇಶ ವ್ಯವಹಾರದಲ್ಲಿ ಅನುಕೂಲ ಆಗಲಿದೆ. ಈ ಅವಧಿಯಲ್ಲಿ ದೈಹಿಕ ಸಮಸ್ಯೆಗಳು ಕಾಡಬಹುದು. ವಾರದ ಅಂತ್ಯದಲ್ಲಿ ಸಾಲ ಮರು ಪಾವತಿಯಲ್ಲಿ ಸಮಸ್ಯೆ ಎದುರಾಗುತ್ತದೆ. ಶುಭದಿನ 04. ವಿಷ್ಣು ಸಹಸ್ರನಾಮ ಪಠಿಸಿರಿ.




ಆದಾಯದಲ್ಲಿ ಹೆಚ್ಚಳ ಆಗುತ್ತಾ ಹೋಗುತ್ತದೆ. ಆ ಮೂಲಕ ಜೀವನ ಶೈಲಿ ಹಾಗೂ ಜೀವನ ಗುಣಮಟ್ಟ ಉತ್ತಮಗೊಳ್ಳಲಿದೆ. ಈ ವಾರ ಕೆಲವು ಉಪಯುಕ್ತ ಸಂಪನ್ಮೂಲಗಳನ್ನು ಕ್ರೋಡೀಕರಿಸಲು ಸಾಧ್ಯವಾಗುತ್ತದೆ. ಕೆಲವು ಸಂಗತಿಗಳಲ್ಲಿ ವೇಗವನ್ನು ತರುವುದು ಸವಾಲಾಗಿ ಪರಿಣಮಿಸಲಿದೆ. ವಿವಿಧ ಆದಾಯ ಮೂಲಗಳಿಂದ ಅನುಕೂಲ ಒದಗಿ ಬರಲಿದೆ. ಶುಭದಿನ 03. ಶಿವಕವಚ ಪಠಣ ಮಾಡಿರಿ.




ವೃತ್ತಿಪರ ಬದುಕಿನಲ್ಲಿ ಹಲವು ಅವಕಾಶಗಳು ನಿಮಗೆ ದೊರೆಯಲಿವೆ. ನಿಮ್ಮ ಉತ್ಸಾಹ ಹೆಚ್ಚಾಗಲಿದೆ. ಈ ಹಿಂದೆ ನಿಮ್ಮನ್ನು ಮಾನಸಿಕವಾಗಿ ಚಿಂತೆಗೆ ಈಡು ಮಾಡಿದ್ದ ವಾತಾವರಣವು ಕರಗಲಿದೆ. ಈ ಅವಧಿಯಲ್ಲಿ ನಿಮ್ಮ ಆರೋಗ್ಯ ಅನುಕೂಲಕರವಾಗಿ ಪರಿಣಮಿಸಲಿದೆ. ಆಹಾರ ಪಥ್ಯವನ್ನು ಅನುಸರಿಸಲಿದ್ದೀರಿ. ಉದ್ಯೋಗದಲ್ಲಿ ಬಡ್ತಿ ಸಿಗುವ ಸಾಧ್ಯತೆ ಇದೆ. ಶುಭದಿನ 02. ರಾಘವೇಂದ್ರ ಸ್ವಾಮಿ ಭಜನೆ ಮಾಡಿರಿ.